ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ನಗರ ಸ್ಥಳೀಯ ಸಂಸ್ಥೆಗಳಲ್ಲಿ ಶೌಚಾಲಯ ನಿರ್ಮಿಸುತ್ತಿರುವ ಕುರಿತು

ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂಧ ಚುನಾಯಿತರಾದವರು):-

1548 (1839) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 3 ವರ್ಷಗಳ ಅವಧಿಯಲ್ಲಿ ಬೀದರ್ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಆರೋಗ್ಯ ಇಲಾಖೆಯ ವಿಭಾಗದಲ್ಲಿ ಸ್ವಚ್ಛ ಭಾರತ ಮಿಷನ್ ಯೋಜನೆ ಅಡಿಯಲ್ಲಿ ಬಡವರಿಗಾಗಿ ಪ್ರತ್ಯೇಕವಾಗಿ ಶೌಚಾಲಯ ನಿರ್ಮಾಣ ಮಾಡಿಕೊಳ್ಳಲು ಒಟ್ಟು ಬಂದ ಅರ್ಜಿಗಳೆಷ್ಟು ; ಅದರಲ್ಲಿ ಆಯ್ಕೆಯಾದ/ತಿರಸ್ಕೃತಗೊಂಡ ಫಲಾನುಭವಿಗಳೆಷ್ಟು ; (ಆಯ್ಕೆಯಾದ ಫಲಾನುಭವಿಗಳ ಹೆಸರು ಸಹಿತ ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ಶೌಚಾಲಯ ನಿರ್ಮಾಣಕ್ಕೆ ತಗುಲಿದ ವೆಚ್ಚ ಎಷ್ಟು ; (ವರ್ಗವಾರು ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳ ಶೌಚಾಲಯಗಳನ್ನು ಸ್ವತಃ ಫಲಾನುಭವಿಗಳೇ ಕಟ್ಟಿಸಿಕೊಳ್ಳುತ್ತಿದ್ದಾರೆಯೇ ; ಅಥವಾ ಗುತ್ತಿಗೆದಾರರ ಮುಖಾಂತರ ಕಟ್ಟಿಸಿ ಕೊಡಲಾಗುತ್ತಿದೆಯೇ ; ಪ್ರತಿ ಶೌಚಾಲಯಕ್ಕೆ ತಗುಲಿದ ಮೊತ್ತದೊಂದಿಗೆ ಸಂಪೂರ್ಣವಾದ ಮಾಹಿತಿ ನೀಡುವುದು ?